**ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ. ಎಂ. ಎಫ್.ಸಿ., ನ್ಯಾಯಾಲಯ ಚನ್ನಪಟ್ಟಣ ಚನ್ನಪಟ್ಟಣ.**

**ಸಿ.ಸಿ. ಸಂಖ್ಯೆ: 388/2023**

ಚಾಸಾಃ 2 ಪ್ರಾಸಾಃ2

| | | |
|---|---|---|
| ಹೆಸರು | : | ಚಂದ್ರ |
| ಗಂಡನ/ತಂದೆಯ ಹೆಸರು | : | ಗುಂಡ |
| ವಯಸ್ಸು | : | 26 ವರ್ಷ |
| ಉದ್ಯೋಗ | : | ಕೂಲಿ |
| ವಾಸ | : | ಅಂಬಾಡಹಳ್ಳಿ ಗ್ರಾಮ. |

**ದಿನಾಂಕ 20.02.2026 ರಂದು ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ**

ಆರೋಪಿತರು ಗೊತ್ತು. ಅವರುಗಳು ನಮ್ಮ ಊರಿನವರಾಗಿರುತ್ತಾರೆ. ಚಾಸಾ-**1** ನನ್ನ ಗೊತ್ತು. ಆರೋಪಿತರು ನನಗೆ ಮತ್ತು ಚಾಸಾ**1** ರವರಿಗೆ ಅವಾಚ್ಯ ಶಬ್ದದಿಂದ ನಿಂದಿಸಿಲ್ಲ, ನನ್ನ ಮೇಲೆ ಹಲ್ಲೆ ಮಾಡಿಲ್ಲ, ಪ್ರಾಣ ಬೆದರಿಕೆ ಹಾಕಿಲ್ಲ, ಈ ಬಗ್ಗೆ ನಾನು ಪೋಲಿಸರಿಗೆ ಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಸಂಪೂರ್ಣ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ ರವರು ಅನುಮತಿ ಕೋರಿದ್ದಾರೆ, ಅನುಮತಿಸಲಾಯಿತು).**

**ಪಾಟೀ ಸವಾಲುಃ ಎಪಿಪಿಯವರಿಂದಃ**

ದಿನಾಂಕ 21.02.2023 ರಂದು ರಾತ್ರಿ 8.00 ಗಂಟೆಯ ಸಮಯದಲ್ಲಿ ನಾನು ಮತ್ತು ಚಾಸಾ1 ರವರು ಕಾಯಿ ಕೀಳಿಸುವ ಸಲುವಾಗಿ ಕೂಲಿ ಕಾರ್ಮಿಕರಿಗೆ ಕೇಳಿ ಬರೋಣಾ ಎಂದು ಜೊತೆಯಲ್ಲಿ ಹೋಗುತ್ತಿರಬೇಕಾದರೆ 4ನೇ ಆರೋಪಿಯ ಮನೆಯ ಮುಂದೆ ನಡೆದುಕೊಂಡು ಹೋಗುತ್ತಿದ್ದಾಗ ಅದೇ ರಸ್ತೆಯಲ್ಲಿ 1 ರಿಂದ 4ನೇ ಆರೋಪಿತರು ನನ್ನ ಮೇಲೆ ಮತ್ತು ಚಾಸಾ1ರವರ ಮೇಲೆ ಜಗಳ ತೆಗೆದು, ಅವಾಚ್ಯ ಶಬ್ದದಿಂದ ಬೈದಿರುತ್ತಾರೆಂದರೆ ಸರಿಯಲ್ಲ. ಆರೋಪಿತರು ನನಗೆ ಮತ್ತು ಚಾಸಾ1 ರವರಿಗೆ ಕುಡುಗೋಲಿನಿಂದ ಹಲ್ಲೆ ಮಾಡಿರುತ್ತಾರೆಂದರೆ ಸರಿಯಲ್ಲ. ಆರೋಪಿತರು ನನಗೂ ಮತ್ತು ಚಾಸಾ1 ರವರಿಗೆ ನಮ್ಮ ವಿಚಾರಕ್ಕೆ ಬಂದರೆ ಒಂದು

ಗತಿ ಕಾಣಿಸುತ್ತೇವೆಂದು ಪ್ರಾಣ ಬೆದರಿಕೆ ಹಾಕಿರುತ್ತಾರೆಂದರೆ ಸರಿಯಲ್ಲ. ಗಲಾಟೆಯಾದ ನಂತರ ಚಾಸಾ3,4 ರವರು ಸಮಾಧಾನ ಮಾಡಿ, ಜಗಳ ಬಿಡಿಸಿ, ನನ್ನನ್ನು ಮತ್ತು ಚಾಸಾ1 ರವರನ್ನು ಆಸ್ಪತ್ರೆಗೆ ಕಳುಹಿಸಿರುತ್ತಾರೆಂದರೆ ಸರಿಯಲ್ಲ. ನಾನು ಈ ಘಟನೆಗೆ ಸಂಬಂದಪಟ್ಟಂತೆ ದಿಃ11.05.2023 ರಂದು ಪೋಲಿಸರಿಗೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಗೆ ಈಗ ಓದಿ ಹೇಳಲಾಗಿ ಸಾಕ್ಷಿ ಒಪ್ಪಿ ಕೊಳ್ಳದ ಹೇಳಿಕೆಯನ್ನು ನಿಪಿ-2 ಎಂದು ಗುರುತಿಸಲಾಯಿತು. ಆರೋಪಿತರು ನಮ್ಮ ಊರಿನವರಾದ ಕಾರಣ ನಿಪಿ-2 ರಂತೆ ಹೇಳಿಕೆ ನೀಡಿದ್ದರೂ ಸಹ ಈ ದಿನ ಉದ್ದೇಶಪೂರ್ವಕವಾಗಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಮರುವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ.ಹೇ.ಕೇ.ಸ.ಒ

**(ವೆಂಕಟೇಶಪ್ಪ. ವಿ)**
**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.**